ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT: ವಿಧಾನಸಭೆ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯಕಾಲ

ದಿನಾಂಕ : DATE: 23/6/20

ಮುಂಗಾರು ಅಧಿವೇಶನ ನಡೆಯಲ್ಲ । ಬೆಳಗಾವಿಯ ಚಳಿಗಾಲದ ಅಧಿವೇಶನವೂ ಡೌಟ್

# ರಾಜ್ಯದಲ್ಲಿ ವಿಧಾನಸಭೆ ಇ-ಅಧಿವೇಶನಕ್ಕೆ ಚಿಂತನೆ

• ಎಸ್. ಲಕ್ಷ್ಮಿ ನಾರಾಯಣ

ಉ.ಕಾ 23/6/20



**ಬೆಂಗಳೂರು:** ಕೊರೊನಾ ಸೋಂಕು ತೀವ್ರಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ರಾಜ್ಯ ವಿಧಾನಸಭೆಯ ಮುಂಗಾರು ಅಧಿವೇಶನ ನಡೆಸದಿರಲು ಸರ್ಕಾರ ತೀರ್ಮಾನಿಸಿದ್ದು ಈ ವರ್ಷವೂ ಬೆಳಗಾವಿಯಲ್ಲಿ ಚಳಿಗಾಲದ ಅಧಿವೇಶನವೂ ನಡೆಯುವುದು ಅನುಮಾನ.

ಆದರೆ, ಇ- ಸಂಸತ್ ಅಧಿವೇಶನ ನಡೆದರೆ ಅದೇ ಮಾದರಿಯಲ್ಲಿ ನವೆಂಬರ್ ಅಥವಾ ಡಿಸೆಂಬರ್‌ನಲ್ಲಿ ರಾಜ್ಯದಲ್ಲಿ ವಿಧಾನಸಭೆ ಅಧಿವೇಶನ ನಡೆಸುವ ಬಗ್ಗೆಯೂ ರಾಜ್ಯ ಸರ್ಕಾರ ಚಿಂತನೆ ನಡೆಸಿದೆ.

ಜುಲೈನಲ್ಲಿ ಮುಂಗಾರು ಅಧಿವೇಶನ ನಡೆಯಬೇಕಿದ್ದು ವಿಕಾಸಸೌಧ, ವಿಧಾನಸೌಧಕ್ಕೂ ಕೊರೊನಾ ಸೋಂಕು ವ್ಯಾಪಿಸಿರುವ ಕಾರಣ ಈಗಿನ ಪರಿಸ್ಥಿತಿಯಲ್ಲಿ ಯಾವುದೇ ಕಾರಣಕ್ಕೂ ಅಧಿವೇಶನ ನಡೆಸುವುದು ಸೂಕ್ತವಲ್ಲ ಎಂಬ ಅಭಿಪ್ರಾಯದ ಹಿನ್ನೆಲೆಯಲ್ಲಿ ಬಹುತೇಕ ಅಧಿವೇಶನ ಮುಂದೂಡಿಕೆಯಾಗಲಿದೆ.

**ಬೆಳಗಾವಿ ಅಧಿವೇಶನವೂ ಡೌಟ್:** ನವೆಂಬರ್‌ನಲ್ಲಿ ಬೆಳಗಾವಿ ಸುವರ್ಣಸೌಧದಲ್ಲಿ ಚಳಿಗಾಲದ ಅಧಿವೇಶನ ನಡೆಸುವ ಉದ್ದೇಶ ಇತ್ತಾದರೂ ಈ ವರ್ಷ ಬೇಡ ಎಂಬ ತೀರ್ಮಾನಕ್ಕೆ ಬರಲಾಗಿದೆ. ಕಳೆದ ವರ್ಷ ಪ್ರವಾಹ ಹಿನ್ನೆಲೆಯಲ್ಲಿ ಬೆಳಗಾವಿ ಅಧಿವೇಶನ ರದ್ದಾಗಿತ್ತು. ಈ ವರ್ಷ ಕೊರೊನಾದಿಂದಾಗಿ ಅಧಿವೇಶನ ನಡೆಸುವುದು ಅನುಮಾನವಾಗಿದೆ ಎಂದು ಸರ್ಕಾರದ ಉನ್ನತ ಮೂಲಗಳು ತಿಳಿಸಿವೆ.

ಅಧಿವೇಶನ ನಡೆಸುವ ಸಂಬಂಧ ಮುಖ್ಯಮಂತ್ರಿ ಹಾಗೂ ಕಾನೂನು ಸಚಿವರ ಅಧ್ಯಕ್ಷತೆಯಲ್ಲಿ ಇತ್ತೀಚೆಗೆ ಸಭೆ ನಡೆಯಿತು. ಪರಿಸ್ಥಿತಿ ಅವಲೋಕಿಸಿ ತಕ್ಷಣಕ್ಕೆ ಅಧಿವೇಶನದ ತೀರ್ಮಾನ ಕೈ ಬಿಡಲು ನಿರ್ಧರಿಸಲಾಯಿತು ಎಂದು ಹೇಳಲಾಗಿದೆ.

**ರಾಜ್ಯದಲ್ಲೂ ಇ-ವಿಧಾನಸಭೆ:** ಈ ಬಾರಿ ಇ-ಸಂಸತ್ ಅಧಿವೇಶನಕ್ಕೆ ಕೇಂದ್ರ ಸರ್ಕಾರ ನಿರ್ಧರಿಸಿ ಆ ಕುರಿತು ಸಿದ್ಧತೆ ನಡೆಸಿದೆ. ನ್ಯಾಷನಲ್ ಇನ್ಫಾರ್ಮೆಟಿಕ್ ಸೆಂಟರ್‌ನ ವೆಬ್‌ಸೈಟ್ ಮೂಲಕ ಇ-ಸಂಸತ್ ಅಧಿವೇಶನ ನಡೆಸುವ ಬಗ್ಗೆ ಮುಂದಾಗಿದೆ. ಇ-ಸಂಸತ್ ನೋಡಿಕೊಂಡು ಆ ನಂತರ ರಾಜ್ಯದಲ್ಲಿ ಅದೇ ಮಾದರಿಯಲ್ಲಿ ಇ- ವಿಧಾನಸಭೆ ಅಧಿವೇಶನ ನಡೆಸುವ ಬಗ್ಗೆ ಚಿಂತನೆ ನಡೆದಿದೆ.

ಇ- ವಿಧಾನಸಭೆ ಅಧಿವೇಶನ ಸಂಬಂಧ ಶಾಸಕರಿಗೂ ತರಬೇತಿ ನೀಡುವ ಬಗ್ಗೆಯೂ ಚರ್ಚೆಗಳು ನಡೆದಿವೆ. ಎಲ್ಲ ಶಾಸಕರು ಶಾಸಕರ ಭವನದ ತಮ್ಮ ಕೊಠಡಿಗಳಲ್ಲಿಯೇ ಕುಳಿತು ಅಧಿವೇಶನದಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಅಥವಾ ಸಾಮಾಜಿಕ ಅಂತರ ಕಾಯ್ದುಕೊಂಡು ಆಡಳಿತ ಹಾಗೂ ಪ್ರತಿ ಪಕ್ಷಗಳಿಂದ ಇಂತಿಷ್ಟು ಸದಸ್ಯರು ಮಾತ್ರ ಪಾಲ್ಗೊಂಡು ವಿಧಾನಸಭೆ ಹಾಗೂ ಪರಿಷತ್‌ನಲ್ಲೇ ಅಧಿವೇಶನ ನಡೆಸಬಹುದಾ ಎಂಬ ಸಾಧ್ಯತೆಗಳ ಬಗ್ಗೆ ಚರ್ಚಿಸಲಾಗುತ್ತಿದೆ. ಆದರೆ, ಶಾಸಕರು ಹೊರತುಪಡಿಸಿ ಇತರೆ ಯಾರಿಗೂ ಪ್ರವೇಶ ಸಿಗುವುದಿಲ್ಲ ಎಂದು ಹೇಳಲಾಗಿದೆ.

## 60 ದಿನದ ತೀರ್ಮಾನ ಪಾಲನೆಯಾಗದು

**ವರ್ಷಕ್ಕೆ 60 ದಿನ ಅಧಿವೇಶನ ನಡೆಸಬೇಕು ಎಂದು ಹಿಂದೆ ಸದನದಲ್ಲಿ ತೀರ್ಮಾನಿಸಲಾಗಿದೆ. ವರ್ಷದ ಮೊದಲು ಜಂಟಿ ಅಧಿವೇಶನ, ನಂತರ ಬಜೆಟ್ ಅಧಿವೇಶನ, ಆ ನಂತರ ಮುಂಗಾರು ಹಾಗೂ ಚಳಿಗಾಲದ ಅಧಿವೇಶನ ಸೇರಿ 60 ದಿನ ನಡೆಸಲು ನಿರ್ಧರಿಸಲಾಗಿತ್ತು. ಆದರೆ, ಈ ಬಾರಿ ವರ್ಷದ ಜಂಟಿ ಅಧಿವೇಶನವೂ ತಡವಾಗಿ ಆರಂಭವಾಗಿ ಫೆ.17 ರಿಂದ 20 ರವರೆಗೆ ನಂತರ ಮಾರ್ಚ್ 2 ರಿಂದ 24 ರವರೆಗೆ 20 ದಿನ ಮಾತ್ರ ಅಧಿವೇಶನ ನಡೆದಿದೆ. ಇದೀಗ ಮುಂಗಾರು ಹಾಗೂ ಚಳಿಗಾಲದ ಅಧಿವೇಶನವೂ ಎಷ್ಟು ದಿನ ನಡೆಯುವುದೋ ಖಚಿತವಾಗಿಲ್ಲ. ಹೀಗಾಗಿ, ಈ ವರ್ಷವೂ 60 ದಿನದ ಅಧಿವೇಶನದ ತೀರ್ಮಾನ ಪಾಲನೆಯಾಗದು.**